| 46 | ಶ್ರೀಮತಿ ಜಯಶ್ರೀ ಎಂ.ಕೆ, | ಬೆರಳಚ್ಚುಗಾರರು | 33,785-00 |
| 47 | ಶ್ರೀ ಜಿ.ಎಸ್. ಜನಾರ್ಧನ, | ವಾಹನ ಚಾಲಕ | 42,483-00 |
| 48 | ಶ್ರೀ ಎಂ. ಮರಿಮಾದಯ್ಯ, | ವಾಹನ ಚಾಲಕ | 30,931-00 |
| 49 | ಶ್ರೀ ಎಸ್.ಎ ಉತ್ತಮ್‌ಕುಮಾರ್, | ವಾಹನ ಚಾಲಕ | 29,849-00 |
| 50 | ಶ್ರೀ ಸಿ. ರಾಮಚಂದ್ರ, | ಗ್ರೂಪ್ ಡಿ. | 31,043-00 |
| 51 | ಶ್ರೀ ಜೆ. ಕಾಸಿಮ್, | ಗ್ರೂಪ್ ಡಿ | 32,320-00 |
| 52 | ಶ್ರೀ ಎ.ಎಂ. ಶ್ರೀನಿವಾಸ , | ಗ್ರೂಪ್ ಡಿ | 27,082-00 |
| 53 | ಶ್ರೀ ಟಿ. ನಂಜುಂಡಯ್ಯ, | ಗ್ರೂಪ್ ಡಿ | 26,346-00 |
| 54 | ಶ್ರೀ ಮುನಿವೆಂಕಟಪ್ಪ, | ಗ್ರೂಪ್ ಡಿ | 24,403-00 |
| 55 | ಶ್ರೀ ಸುನಿಲ್ ಕುಮಾರ್, | ಗ್ರೂಪ್ ಡಿ | 25,484-00 |
| 56 | ಶ್ರೀಮತಿ ಎ .ಹೆಚ್. ಕಮಲಮ್ಮ, | ಗ್ರೂಪ್ ಡಿ | 21,000-00 |
| 57 | ಶ್ರೀ ಮುನಿರಾಜು, | ಗ್ರೂಪ್ ಡಿ | 19,342-00 |
| 58 | ಶ್ರೀ ಜೆ.ಕೆ.ಸೋಜಾ, | ಗ್ರೂಪ್ ಡಿ | 31,790-00 |
| | **ನಿಯೋಜನೆ ಮೇಲೆ ಈ ಕಚೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವವರು** | | |
| 59 | ಶ್ರೀ ತಮ್ಮಯ್ಯ, | ವಾಹನ ಚಾಲಕ | 27,445-00 |
| 60 | ಶ್ರೀಮತಿ ಚೈತ್ರ | ಮೀನುಗಾರಿಕೆ ಕ್ಷೇತ್ರಪಾಲರು | 19,374-00 |
| | **ನಿಯೋಜನೆ ಮೇಲೆ ಬೇರ ಕಚೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವವರು** | | |
| 61 | ಶ್ರೀಮತಿ ಎಂ.ಎಲ್ ಭಾರತಿ. | ಶೀಘ್ರಲಿಪಿಗಾರರು | 36,967-00 |
| 62 | ಶ್ರೀಮತಿ ಎಸ್. ವಿಜಯಲಕ್ಷ್ಮೀ | ಶೀಘ್ರಲಿಪಿಗಾರರು | 33,216-00 |
| 63 | ಶ್ರೀಮತಿ ಎ. ಕೋಮಲ | ಬೆರಳಚ್ಚುಗಾರರು | 24,863-00 |
| 64 | ಶ್ರೀ ಕೆ.ವಿ. ಮೋಹನ | ಗ್ರೂಪ್ ಡಿ | 30,769-00 |

## Section 4(1) (b) (xi)

# Budget Allocated to Each Agency including Plans etc.

## ಮೀನುಗಾರಿಕೆ ಇಲಾಖೆಯ ಆಯವ್ಯಯ 2016-17

ರೂ.ಲಕ್ಷಗಳಲ್ಲಿ

| ಕ್ರ. ಸಂ | ಯೋಜನೆಯ ಹೆಸರು | ಲೆಕ್ಕ ಶೀರ್ಷಿಕೆ | ಯೋಜನೆ | | | ಯೋಜನೇತರ |
|---|---|---|---|---|---|---|
| | | | ಕೇಂದ್ರ | ರಾಜ್ಯ | ಒಟ್ಟು | |
| 1 | ನಿರ್ದೇಶನ ಮತ್ತು ಆಡಳಿತ | 2405–00–001–0–01 | | 150.00 | 150.00 | 868.00 |
| 2 | ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ | 2405–00–101–0–03 | | 322.00 | 322.00 | 301.00 |
| 3 | ಒಳನಾಡು ಮೀನುಗಾರಿಕೆ ಅಂಕಿ ಅಂಶಗಳು ಕೇ.ಪು.ಯೋ. | 2405–00–101–0–06 | 30.00 | | 30.00 | |
| 4 | ಮೀನು ಮರಿ ಖರೀದಿಸಲು ನೆರವು | 2405–00–101–0–28 | | 30.00 | 30.00 | |
| 5 | ಜಲಾಶಯಗಳಲ್ಲಿ ಮೀನುಮರಿ ಬಿತ್ತನೆ | 2405–00–101–0–54 | | 102.00 | 102.00 | |
| 6 | ಒಳನಾಡು ಮೀನುಗಾರರಿಗೆ ಫೈಬರ್ ಗ್ಲಾಸ್ ಹರಿಗೋಲು ವಿತರಣೆ | 2405–00–101–0–56 | | 50.00 | 50.00 | |
| 7 | ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಮೊತ್ತ | 2405–00–101–0–66 | | 459.00 | 459.00 | |
| 8 | ಉತ್ತರ ಕರ್ನಾಟಕ ಒಳನಾಡು ಮೀನುಗಾರಿಕೆ ಅಭಿವೃದ್ಧಿ ಕೇಂದ್ರ ಸ್ಥಾಪನೆ | 2405–00–101–0–67 | | 200.00 | 200.00 | |
| 9 | ಕ್ಲಸ್ಟರ್ ಮಾದರಿ ಯಲ್ಲಿ ಮೀನುಗಾರಿಕೆ ಅಭಿವೃದ್ಧಿ | 2405–00–101–0–68 | | 50.00 | 50.00 | |
| 10 | ಮೀನುಗಾರಿಕೆ ಬಂದರು ಇಳಿದಾಣಗಳ ಅಭಿವೃದ್ಧಿ ಮತ್ತು ನಿರ್ವಹಣೆ | 2405–00–103–0–14 | | 110.00 | 110.00 | 90.00 |
| 11 | ಸಂಕಷ್ಟ ಪರಿಹಾರ ನಿಧಿ | 2405–00–103–0–15 | | 25.00 | 25.00 | |
| 12 | ಮತ್ಸ್ಯಾಶ್ರಯ ಯೋಜನೆ | 2405–00–103–0–20 | | 3225.00 | 3225.00 | |
| 13 | ಸುಧಾರಿತ ಮಾದರಿಯ ಯಾಂತ್ರಿಕೃತ ದೋಣಿಗಳ ನಿರ್ಮಾಣ | 2405–00–103–0–21 | 50.00 | | 50.00 | |
| 14 | ಮೀನುಗಾರಿಕೆ ದೋಣಿಗಳಿಗೆ ಡೀಸಲ್ – ಮಾರಾಟ ತೆರಿಗೆ ಮರುಪಾವತಿ | 2405–00–103–0–23 | | 10050.00 | 10050.00 | |
| 15 | ಮೀನು ಮಾರುಕಟ್ಟೆ ನಿರ್ಮಾಣಕ್ಕೆ ಸಹಾಯ | 2405–00–105–0–09 | | 30.00 | 30.00 | |
| 16 | ಸಂಶೋಧನೆ, ವಿಸ್ತರಣೆ ಪ್ರದರ್ಶನ ಮತ್ತು ತರಬೇತಿ | 2405–00–109–0–01 | | 662.50 | 662.50 | 41.00 |
| 17 | ಮೀನು ಹಿಡಿಯುವ ದೋಣಿಗಳ ಯಾಂತ್ರೀಕರಣ ಮತ್ತು ಸುಧಾರಣೆ | 2405–00–110–0–01 | | | | 12.00 |
| 18 | ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ | 2405–00–110–0–02 | | 103.00 | 103.00 | |
| 19 | ಮಂಜುಗಡ್ಡೆ ಸ್ಥಾವರ ಉಪಯೋಗಿಸುವ ವಿದ್ಯುತ್ ಮೇಲೆ ಸಹಾಯಧನ | 2405–00–110–0–03 | | 400.00 | 400.00 | |

| | | | | | | |
|---|---|---|---|---|---|---|
| 20 | ಮೀನುಗಾರರ ಕಲ್ಯಾಣ ಯೋಜನೆಗಳು ಕೆ.ಪು.ಯೋ. | 2405–00–120–0–07 | | | | |
| ಅ | ಉಳಿತಾಯ ಮತ್ತು ಪರಿಹಾರ ಯೋಜನೆ | | 356.00 | 375.00 | 731.00 | |
| ಬ | ಮನೆಗಳ ನಿರ್ಮಾಣ | | 200.00 | 100.00 | 300.00 | |
| ಕ | ಸಾಮೂಹಿಕ ಅಪಘಾತ ವಿಮಾಯೋಜನೆ | | | 22.00 | 22.00 | |
| | **ಒಟ್ಟು** | | **556.00** | **497.00** | **1053.00** | **0.00** |
| 21 | ವಾಣಿಜ್ಯ ಬ್ಯಾಂಕುಗಳಿಗೆ ವ್ಯತ್ಯಾಸದ ಬಡ್ಡಿ ಮರುಪಾವತಿ | 2405–00–195–0–01 | | 100.00 | 100.00 | |
| 22 | ಕರಾವಳಿ ಸಂಪರ್ಕ ರಸ್ತೆಗಳ ನಿರ್ವಹಣೆ | 2405–00–337–0–01 | | 400.00 | 400.00 | |
| 23 | ರಾಜ್ಯ ವಲಯ ಯೋಜನೆಯಡಿ ಹಿಂದುಳಿದ ವರ್ಗಗಳಿಗೆ ವಿಶೇಷ ಘಟಕ ಯೋಜನೆ | 2405–00–789–0–03 | | 300.00 | 300.00 | |
| 24 | ಗಿರಿಜನ ಉಪಯೋಜನೆ | 2405–00–796–0–00 | | 40.00 | 40.00 | |
| 25 | ಮೀನು ಮರಿ ಉತ್ಪಾದನಾ ಕೇಂದ್ರಗಳ ನಿರ್ಮಾಣ ಮತ್ತು ಅಭಿವೃದ್ಧಿ | 2405–00–800–0–29 | | 100.00 | 100.00 | |
| | **2405–ಒಟ್ಟು** | | **636.00** | **17405.50** | **18041.50** | **1312.00** |
| 26 | ಹೂಳೆತ್ತುವುದು ಜಲಸಂಚಾರ ಮತ್ತು ಇತರ ಕಾಮಗಾರಿಗಳು | 4405–00–103–1–02 | 200.00 | 200.00 | 400.00 | |
| 27 | ಮೀನುಗಾರಿಕೆ ಬಂದರುಗಳ ನಿರ್ಮಾಣ–ಕೇ.ಪು.ಯೋ | 4405–00–103–6–01 | 2000.00 | 500.00 | 2500.00 | |
| 28 | ಮೀನುಗಾರಿಕೆ ಜೆಟ್ಟಿ ಮತ್ತು ಮೀನು ಇಳಿದಾಣಗಳ ನಿರ್ಮಾಣ | 4405–00–104–0–02 | 1000.00 | 1476.00 | 2476.00 | |
| 29 | ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಮೊತ್ತ | 4405–00–800–0–01 | | 185.00 | 185.00 | |
| 30 | ಮೀನುಗಾರಿಕೆ ಕೊಂಡಿ ರಸ್ತೆಗಳ, ಸೇತುವೆಗಳ ಮತ್ತು ಜೆಟ್ಟಿಗಳ ನಿರ್ಮಾಣ–ನಬಾರ್ಡ್ ಸಹಾಯ | 4405–00–800–2–03 | | 2561.00 | 2561.00 | |
| | **4405–ಒಟ್ಟು** | | **3200.00** | **4922.00** | **8122.00** | **0.00** |
| | **2405+4405 ಒಟ್ಟು** | | **3836.00** | **22327.50** | **26163.50** | **1312.00** |
| | **ಜಿಲ್ಲಾ ಪಂಚಾಯತ್ ಯೋಜನೆಗಳು** | | | | | |
| 1 | ಮೀನುಗಾರಿಕೆ ಕಟ್ಟಡಗಳು ಮತ್ತು ಸೌಲಭ್ಯಗಳ ನಿರ್ಮಾಣ ಮತ್ತು ನಿರ್ವಹಣೆ | 2405–00–101–0–27 | | 369.65 | 369.65 | |
| 2 | ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ | 2405–00–101–0–28 | | 386.45 | 386.45 | |
| 3 | ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ | 2405–00–101–0–30 | | 123.80 | 123.80 | |
| 4 | ಪ್ರದರ್ಶನಗಳು ಮತ್ತು ತರಬೇತಿ | 2405–00–101–0–32 | | 65.1 | 65.10 | |

| | | | | | | |
|---|---|---|---|---|---|---|
| 5 | ಸಂಪ್ರದಾಯ ದೋಣಿಗಳನ್ನು ಯಾಂತ್ರೀಕರಿಸುವ ಕೇಂ.ಪು.ಯೋಜನೆ | 2405–00–104–0–02 | 58.00 | 58.00 | 116.00 | |
| 6 | ಜಿಲ್ಲಾ ಮತ್ತು ಇತರೆ ಸಿಬ್ಬಂದಿ | 2405–00–101–0–26 | | | | 1662.00 |
| | **ಒಟ್ಟು ಜಿಲ್ಲಾ ಪಂಚಾಯತ್** | | **58.00** | **1003.00** | **1061.00** | **1662.00** |
| | **ಒಟ್ಟು ಮೊತ್ತ** | | **3894.00** | **23330.50** | **27224.50** | **2974.00** |

# <u>Section 4(1) (b) (xii)</u>

## Manner of Execution of Subsidy Programmes
## The details of the beneficiary oriented schemes are given below:

### 2016–17 ನೇ ಸಾಲಿನ ಮೀನುಗಾರಿಕೆ ಇಲಾಖೆಯ ಯೋಜನೆಗಳ ವಿವರ

1. **ನಿರ್ದೇಶನ ಮತ್ತು ಆಡಳಿತ (2405–00–001–0–01)**

ಈ ಯೋಜನೆಯಡಿ ಸಿಬ್ಬಂದಿ ವೆಚ್ಚ, ಅಭಿಯಂತರರ ಸಂಬಳ, ಗಣಕಯಂತ್ರ, ಫ್ಯಾಕ್ಸ್ ಯಂತ್ರ ಮತ್ತು ಇತರೆ ವಿದ್ಯುನ್ಮಾನ ಉಪಕರಣಗಳ ಅಳವಡಿಕೆ ಮತ್ತು ಅವುಗಳ ನಿರ್ವಹಣೆ, ವಾಹನ ನಿರ್ವಹಣೆ / ಖರೀದಿ, ಇತ್ಯಾದಿ ವೆಚ್ಚವನ್ನು ಭರಿಸಲು ಅವಕಾಶ ಕಲ್ಪಿಸಲಾಗಿದೆ. ನಿರ್ದೇಶನಾಲಯವು ಸೇರಿದಂತೆ ಇತರ ಕಛೇರಿಗಳ ಕಟ್ಟಡಗಳ ನಿರ್ಮಾಣ ಮತ್ತು ನಿರ್ವಹಣೆ, ಆಧುನೀಕರಣ ಮತ್ತು ದುರಸ್ತಿ ಕೆಲಸಗಳನ್ನು ತೆಗೆದುಕೊಳ್ಳಲು, ಮತ್ಸ್ಯಾಲಯಗಳ ಕಾಮಗಾರಿಗಳು ಮತ್ತು ನಿರ್ವಹಣೆಗೆ ಬೇಕಾಗುವ ಸಲಕರಣೆಗಳನ್ನು ಮತ್ತು ಇತರೆ ಸಾಮಗ್ರಿಗಳನ್ನು ಖರೀದಿಸಲು, ಅವಕಾಶ ಕಲ್ಪಿಸಲಾಗಿದೆ. **(ಅನುದಾನ : ರೂ.150.00 ಲಕ್ಷ)**

2. **ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ (2405–00–101–0–03)**

ಸಿಬ್ಬಂದಿ ವೆಚ್ಚ, ಮೀನುಮರಿ ಉತ್ಪಾದನೆ, ಸಾಕಾಣಿಕೆ ಕೇಂದ್ರಗಳಿಗೆ ಬೇಕಾದ ನಿರ್ವಹಣಾ ವೆಚ್ಚ, ವಾಹನಗಳ ನಿರ್ವಹಣೆ, ಮೀನುಮರಿ ಕೇಂದ್ರಗಳ ಸಿಬ್ಬಂದಿ ವೆಚ್ಚ, ಮೀನುಮರಿ ಖರೀದಿ ಹಾಗೂ ಮೀನು ಕೊಳಗಳ ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚಿಸಲು, ಜಲಾಶಯಗಳ ಅಭಿವೃದ್ಧಿ ಪಡಿಸುವುದು, ದೋಷಪೂರಿತ ಕೊಳಗಳ ದುರಸ್ತಿ ನಿರ್ವಹಣೆ ಮತ್ತು ಉಪಯೋಗದಲ್ಲಿರುವ ಕೊಳಗಳ ವಾರ್ಷಿಕ ನಿರ್ವಹಣೆ, ಹಲವಾರು ನದಿಗಳಲ್ಲಿರುವ ಮತ್ಸ್ಯಧಾಮಗಳ ಅಭಿವೃದ್ಧಿ ಕೈಗೊಳ್ಳಲಾಗುವುದು. **(ಅನುದಾನ: ರೂ.322.00 ಲಕ್ಷ)**

3. **ಒಳನಾಡು ಮೀನುಗಾರಿಕೆ ಅಂಕಿ ಅಂಶಗಳು (ಕೇಂದ್ರ ಪುರಸ್ಕೃತ ಯೋಜನೆ) (2405–00–101–0–06)**

ಈ ಲೆಕ್ಕ ಶೀರ್ಷಿಕೆಯಡಿ ಒಳನಾಡು ಮತ್ತು ಕರಾವಳಿ ಮೀನುಗಾರಿಕೆಯ ಅಂಕಿಅಂಶಗಳನ್ನು ಸಂಗ್ರಹಿಸಲು ಮಾದರಿ ವಿಧಾನಗಳನ್ನು ಅಭಿವೃದ್ಧಿ ಪಡಿಸಲು ಮಂಜೂರು ಮಾಡಿರುವ ಹುದ್ದೆಗಳ ಸಿಬ್ಬಂದಿ ವೆಚ್ಚ, ಗಣಕೀಕೃತ ಯಂತ್ರಗಳನ್ನು ಖರೀದಿ, ಗಣತೀದಾರರನ್ನು ನೇಮಕಕ್ಕೆ ಅವಕಾಶ ಕಲ್ಪಿಸಲಾಗಿದೆ. ಇದು ಶೇ.100 ರಷ್ಟು ಕೇಂದ್ರ ವಲಯ ಯೋಜನೆಯಾಗಿದ್ದು ಪೂರ್ಣ ವೆಚ್ಚವನ್ನು ಕೇಂದ್ರ ಸರ್ಕಾರದಿಂದ ಭರಿಸಲಾಗುವುದು.

**(ಅನುದಾನ ರೂ: 30.00 ಲಕ್ಷ  (ಕೇಂದ್ರದ ಪಾಲು: ರೂ.30.00 ಲಕ್ಷ))**

4. **ಮೀನು ಮರಿ ಖರೀದಿಸಲು ನೆರವು (2405–00–101–0–28)**

ಸರ್ಕಾರ ಸ್ವಾಮ್ಯದ ಉತ್ಪಾದನಾ ಮತ್ತು ಪಾಲನಾ ಕೇಂದ್ರಗಳಿಂದ ಖರೀದಿಸಿದ ಎಲ್ಲಾ ತಳಿಗಳ ಮೀನುಮರಿ ಬೆಲೆಯ ಶೇ.50 ರಷ್ಟು ಅಂದರೆ ವ್ಯಕ್ತಿಗತ ಗರಿಷ್ಠ ರೂ.5,000/– ಹಾಗೂ ಸಂಘ ಸಂಸ್ಥೆಗಳಿಗೆ ಗರಿಷ್ಠ ರೂ.20,000/–ಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ನೀಡಲಾಗುವುದು. ಮೀನುಗಾರಿಕೆ ಇಲಾಖೆಯಿಂದ ನೋಂದಾಯಿಸಿಕೊಂಡು ಸ್ವಂತ ಕೊಳಗಳಲ್ಲಿ ಮೀನು ಮರಿ ಪಾಲನೆ ಕೈಗೊಳ್ಳಲು ಆಸಕ್ತರಿರುವ ಪಾಲನಗಾರರು ಪ್ರತಿ ಹೆಕ್ಟೇರ್ ಜಲವಿಸ್ತೀರ್ಣಕ್ಕೆ 50 ಲಕ್ಷ ಸ್ಪಾನ್ ಅಥವಾ 10 ಲಕ್ಷ ಫ್ರೈ ಖರಿದಿಸಲು ಶೇ.50 ರಷ್ಟು ಗರಿಷ್ಠ ರೂ.25,000 ಗಳ ಸಹಾಯಧನ ಪಡೆಯಲು ಅವಕಾಶ ಕಲ್ಪಿಸಲಾಗಿದೆ. **(ಅನುದಾನ ರೂ.30.00 ಲಕ್ಷ.)**

5. **ಜಲಾಶಯಗಳಲ್ಲಿ ಮೀನು ಮರಿ ಬಿತ್ತನೆ (2405–00–101–0–54):**

ರಾಜ್ಯದ ಆಯ್ದ ಜಲಾಶಯಗಳಲ್ಲಿ ಬೆರಳಿದ್ದದ ಮೀನು ಮರಿ ಬಿತ್ತನೆ ಮಾಡುವ ಮೂಲಕ ಮೀನುಗಾರಿಕೆ ಅಭಿವೃದ್ಧಿ ಕೈಗೊಳ್ಳುವುದು. **(ಅನುದಾನ : ರೂ. 102.00 ಲಕ್ಷ)**

6. **ಒಳನಾಡು ಮೀನುಗಾರರಿಗೆ ಫೈಬರ್ ಗ್ಲಾಸ್ ಹರಿಗೋಲುಗಳ ವಿತರಣೆ (2405–00–101–0–56)**

ರಾಜ್ಯದ ಎಲ್ಲಾ ಒಳನಾಡು ಜಿಲ್ಲೆಗಳ ಕೆರೆ, ಜಲಾಶಯ ಹಾಗೂ ನದಿಭಾಗಗಳಲ್ಲಿ ಮೀನುಗಾರಿಕೆಯಲ್ಲಿ ತೊಡಗಿರುವ ಮೀನುಗಾರರಿಗೆ ಸದ್ರಿ ಯೋಜನೆಯಡಿ ಒಂದು ಫೈಬರ್‌ಗ್ಲಾಸ್ ಹರಿಗೋಲು ಹಾಗೂ ಎರಡು

ಹುಟ್ಟುಗಳನ್ನು ಖರೀದಿಸಲು ಅವಕಾಶ ಮಾಡಲಾಗಿದೆ. ಇದರ ಘಟಕ ವೆಚ್ಚ ರೂ.10,000/– ಗಳಾಗಿದ್ದು ಶೇ.100 ರಷ್ಟು ಸಹಾಯಧನ ನೀಡಲಾಗವುದು. **(ಅನುದಾನ: ರೂ. 50.00 ಲಕ್ಷ)**

**7. ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ 2013 ರಡಿ ಬಳಕೆಯಾಗದೆ ಇರುವ ಮೊತ್ತ (2405–00–101–0–66)**

ಅನುಸೂಚಿತ ಜಾತಿ ಮತ್ತು ಪಂಗಡಕ್ಕೆ ಸೇರಿದ ಮೀನುಗಾರರಿಗೆ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುವುದು. **(ಅನುದಾನ: ರೂ. 459.00 ಲಕ್ಷ)**

**8. ಉತ್ತರ ಕರ್ನಾಟಕ ಒಳನಾಡು ಮೀನುಗಾರಿಕೆ ಅಭಿವೃದ್ಧಿ ಕೇಂದ್ರ ಸ್ಥಾಪನೆ (2405–00–101–0–67)**

ಉತ್ತರ ಕರ್ನಾಟಕದಲ್ಲಿ ಸುಮಾರು 1.64 ಲಕ್ಷ ಹೆಕ್ಟೇರ್ ವಿಸ್ತೀರ್ಣದ ಜಲಾಶಯಗಳು 42,195 ಹೆಕ್ಟೇರ್ ವಿಸ್ತೀರ್ಣದ ದೊಡ್ಡಕೆರೆಗಳು, 20667 ಹೆಕ್ಟೇರ್ ವಿಸ್ತೀರ್ಣದ ಗ್ರಾಮ ಪಂಚಾಯತ್ ಕೆರೆಗಳು, ನದಿಗಳು ಮತ್ತು ಕಾಲುವೆಗಳಿದ್ದು, ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ವಿಫುಲ ಅವಕಾಶವನ್ನು ನೀಡುತ್ತವೆ. ಈ ಹಿನ್ನೆಲೆಯಲ್ಲಿ ಇಲಾಖೆಯ ಅಧಿಕಾರಿಗಳನ್ನೊಳಗೊಂಡ "ಉತ್ತರ ಕರ್ನಾಟಕ ಒಳನಾಡು ಮೀನುಗಾರಿಕೆ ಅಭಿವೃದ್ದಿ ಸಂಸ್ಥೆ" ಎಂಬ ಸಂಸ್ಥೆಯನ್ನು ಸೃಷ್ಟಿಸಲು ಯೋಜಿಸಲಾಗಿದೆ. ಉದ್ದೇಶಿತ ಸಂಸ್ಥೆಯ ಮುಖ್ಯ ಉದ್ದೇಶಗಳೆಂದರೆ,

- ಉತ್ತರ ಕರ್ನಾಟಕದ ಸಮಗ್ರ ಮೀನುಗಾರಿಕೆ ಅಭಿವೃದ್ದಿಗೆ ಸ್ಥಳೀಯ ಅಗತ್ಯತೆಗೆ ಅನುಗುಣವಾಗಿ ಕಾರ್ಯಕ್ರಮಗಳನ್ನು ರೂಪಿಸಿ, ಅನುಷ್ಟಾನಗೊಳಿಸುವುದು.
- ಅಗತ್ಯ ಯೋಜನಾ ವರದಿ ಸಿದ್ಧಪಡಿಸಿ ವಿವಿಧ ಮೂಲಗಳಿಂದ ಮೀನುಗಾರಿಕೆ ಚಟುವಟಿಕೆಗಳಿಗೆ ಅನುದಾನವನ್ನು ಪಡೆದು ಕಾರ್ಯಕ್ರಮ ಅನುಷ್ಠಾನಗೊಳಿಸುವುದು. ಮತ್ತು
- ಮೀನುಗಾರಿಕೆ ಶಿಕ್ಷಣ, ಸಂಶೋಧನೆ, ವಿಸ್ತರಣೆ ಮತ್ತು ಅಭಿವೃದ್ದಿಯಲ್ಲಿ ನಿರತರಾಗಿರುವ ಸಂಸ್ಥೆಗಳು ಹಾಗೂ ಮೀನುಗಾರರ ಸಂಘಟನೆಗಳ ಸಹಯೋಗದೊಂದಿಗೆ ಉತ್ತರ ಕರ್ನಾಟಕದ ಮೀನುಗಾರಿಕೆ ಮತ್ತು ಮೀನು ಕೃಷಿ ಅಭಿವೃದ್ಧಿಗೆ ಕ್ರಮವಹಿಸುವುದು.

**(ಅನುದಾನ: ರೂ. 200.00 ಲಕ್ಷ)**

**9. ಕ್ಲಸ ರ್ ಮಾದರಿಯಲ್ಲಿ ಮೀನುಗಾರಿಕೆ ಅಭಿವೃದ್ಧಿ (2405–00–101–0–68)**

ಸಮಗ್ರ ಮೀನು ಕೃಷಿಗೆ ಕ್ಲಸ್ಟರ್ ಮಾದರಿಯಲ್ಲಿ ಆಯ್ದ 5 ತಾಲ್ಲೂಕುಗಳಲ್ಲಿ ಸಮಗ್ರವಾಗಿ ಮತ್ತು ಸುಸಂಘಟಿತ ಮಾದರಿಯಲ್ಲಿ ಮೀನು ಕೃಷಿಯ ಅಭಿವೃದ್ಧಿಯನ್ನು ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ 2015–16 ನೇ ಸಾಲಿನಲ್ಲಿ ಪ್ರಾರಂಭಿಸಲಾಗಿದೆ. ಈ ಯೋಜನೆಯಡಿ ಕೃಷಿಕರಿಗೆ ಮೀನು ಸಾಕಾಣಿಕೆ ಕೊಳ ಮತ್ತು ಇತರೆ ಮೂಲಭೂತ ಸೌಕರ್ಯಗಳ ಸೃಷ್ಟಿಗೆ ಸಹಾಯಧನ ನೀಡಲಾಗುವುದು. ಕ್ಲಸ್ಟರ್‌ಗಳನ್ನು ಕೃಷಿಗೆ ಅನುಪಯುಕ್ತವಾಗಿರುವ ಜೌಗು–ಚೌಳು ಪ್ರದೇಶಗಳಲ್ಲಿ ಮೀನು ಸಾಕಾಣಿಕೆಗೆ ಆದ್ಯತೆ ನೀಡಲಾಗುವುದು. ಈ ಯೋಜನೆಯನ್ನು ರಾಜ್ಯ ವಲಯದಿಂದ ಕೈಗೊಳ್ಳಲು ಪ್ರಸ್ತಾವಿಸಲಾಗಿದೆ. **(ಅನುದಾನ: ರೂ. 50.00 ಲಕ್ಷ)**

**10. ಮೀನುಗಾರಿಕೆ ಬಂದರು ಮತ್ತು ಇಳಿದಾಣಗಳ ಅಭಿವೃದ್ಧಿ ಮತ್ತು ನಿರ್ವಹಣೆ (2405–00–103–0–14):**

ಈ ಯೋಜನೆಯಡಿ ಸಿಬ್ಬಂದಿ ವೇತನ, ರಾಜ್ಯದ ಪ್ರಮುಖ ಮೀನುಗಾರಿಕೆ ಬಂದರುಗಳಾದ ಮಲ್ಪೆ, ಮಂಗಳೂರು, ತದಡಿ, ಕಾರವಾರ, ಗಂಗೊಳ್ಳಿ, ಕೊಡೇರಿ, ಆಮದಳ್ಳಿ, ಭಟ್ಕಳ ಮತ್ತು ಹೊನ್ನಾವರ ಮೀನುಗಾರಿಕೆ ಬಂದರುಗಳ ನಿರ್ವಹಣೆ ವೆಚ್ಚಗಳು, ಮೀನುಗಾರಿಕೆ ಬಂದರು ಮತ್ತು ತಂಗುದಾಣಗಳಲ್ಲಿ ಲಘು ಕಾಮಗಾರಿಗಳನ್ನು ಕೈಗೊಳ್ಳುವ ಹಾಗೂ ಬಂದರುಗಳ ನಿರ್ಮಾಣಕ್ಕೆ ಅಗತ್ಯವಿರುವ ಮಾದರಿ ಅಧ್ಯಯನ ಕೈಗೊಳ್ಳುವ ವೆಚ್ಚ ಭರಿಸಲು ಅವಕಾಶ ಮಾಡಲಾಗಿದೆ. **(ಅನುದಾನ: ರೂ. 110.00 ಲಕ್ಷ)**

**11. ಸಂಕಷ್ಠ ಪರಿಹಾರ ನಿಧಿಗೆ ಅಂಶದಾನಗಳು (2405–00–103–0–15):**

ಸಂಕಷ್ಟ ಪರಿಹಾರ ನಿಧಿಗೆ ಸರ್ಕಾರದಿಂದ ಮೂಲ ಬಂಡವಾಳ ನೀಡುವ ಸಲುವಾಗಿ ಆಯವ್ಯಯದಲ್ಲಿ ಅವಕಾಶ ಕಲ್ಪಿಸಲಾಗಿದೆ. ಈ ನಿಧಿಯಿಂದ ಮೀನುಗಾರಿಕೆಯಲ್ಲಿ ತೊಡಗಿರುವಾಗ ನೈಸರ್ಗಿಕ ವಿಕೋಪಗಳಿಂದ ಮರಣ ಹೊಂದಿದ ಮೀನುಗಾರರ ಆವಲಂಬಿತರಿಗೆ ಹಾಗೂ ಶಾಶ್ವತ ಅಂಗವಿಕಲರಾದ ಮೀನುಗಾರರಿಗೆ ರೂ.200,000/– ಗಳ ಪರಿಹಾರ ಮತ್ತು ಭಾಗಶಃ ಅಂಗವಿಕಲರಾದವರಿಗೆ ರೂ.100,000 ಗಳ ಪರಿಹಾರ ನೀಡಲು ಹಾಗೂ ಬಲೆಹಾನಿ,

ದೋಣಿಹಾನಿ ಮತ್ತು ವೈದ್ಯಕೀಯ ವೆಚ್ಚಗಳಿಗೆ ಗರಿಷ್ಠ ರೂ.25,000/- ನೆರವು ನೀಡಲು ಅವಕಾಶವಿದೆ. **(ಅನುದಾನ: ರೂ. 25.00 ಲಕ್ಷ)**

**12. ಮತ್ಸ್ಯಾಶ್ರಯ ಯೋಜನೆ (2405-00-103-0-20)**

ವಸತಿ ರಹಿತ ಮೀನುಗಾರರಿಗೆ ವಸತಿ ಸೌಲಭ್ಯವನ್ನು ಕಲ್ಪಿಸಲು ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಮನೆ ನಿರ್ಮಾಣಕ್ಕೆ ರೂ.1.20 ಲಕ್ಷ ಸಹಾಯಧನ ನೀಡಲಾಗುವುದು. ಈ ಯೋಜನೆಯಡಿ ಸಹಾಯಧನ ಶೇ.100 ರಷ್ಟಾಗಿರುತ್ತದೆ. **(ಅನುದಾನ:ರೂ. 3225.00 ಲಕ್ಷ)**

**13. ಸುಧಾರಿತ ಮಾದರಿಯ ಯಾಂತ್ರೀಕೃತ ದೋಣಿಗಳ ನಿರ್ಮಾಣ (2405-00-103-0-21)**

ಕೇಂದ್ರ ಪುರಸ್ಕೃತ ಯೋಜನೆ. ಸುಧಾರಿತ ಮಾದರಿಯ ಯಾಂತ್ರೀಕೃತ ದೋಣಿಗಳ ನಿರ್ಮಾಣಕ್ಕಾಗಿ ಕೇಂದ್ರ ಸರ್ಕಾರವು ಘಟಕ ವೆಚ್ಚದ ಶೇ.10 ರಷ್ಟು ಗರಿಷ್ಠ ರೂ.6.00 ಲಕ್ಷಗಳನ್ನು ಸಹಾಯಧನವಾಗಿ ನೀಡುತ್ತದೆ. ಉಳಿದ ಮೊತ್ತವನ್ನು ಫಲಾನುಭವಿ ಭರಿಸಬೇಕಿದೆ. **(ಅನುದಾನ: ರೂ. 50.00 ಲಕ್ಷ (ಕೇಂದ್ರದ ಪಾಲು: ರೂ.50.00 ಲಕ್ಷ))**

**14. ಮೀನುಗಾರಿಕೆ ದೋಣಿಗಳಿಗೆ ಡೀಸಲ್ – ಮಾರಾಟ ತೆರಿಗೆ ಮರುಪಾವತಿ (2405-00-103-0-23)**

ಯಾಂತ್ರೀಕೃತ ಮೀನುಗಾರಿಕೆ ದೋಣಿಗಳು ಬಳಸುವ ರಾಜ್ಯ ಮಾರಾಟ ಕರಕ್ಕೆ ಸಮನಾದ ಮೊತ್ತವನ್ನು ದೋಣಿಗಳ ಮಾಲೀಕರ ಬ್ಯಾಂಕ್ ಖಾತೆಗೆ ನೇರವಾಗಿ ಬಿಡುಗಡೆ ಮಾಡುವ ಮೂಲಕ ಮರುಪಾವತಿ ಮಾಡುವುದು ಈ ಯೋಜನೆಯ ಉದ್ದೇಶ. ವಾರ್ಷಿಕ ಯಾಂತ್ರೀಕೃತ ಮೀನುಗಾರಿಕೆ ದೋಣಿಗಳಿಗೆ 1,50,000 ಕಿಲೋ ಲೀಟರ್ ಡೀಸಲ್‌ನ್ನು ವಿತರಿಸಲಾಗುತ್ತಿದೆ. **(ಅನುದಾನ: ರೂ. 10050.00 ಲಕ್ಷ)**

**15. ಮೀನು ಮಾರುಕಟ್ಟೆಗಳ ನಿರ್ಮಾಣಕ್ಕಾಗಿ ಸಹಾಯ: (2405-00-105-0-09)**

ರಾಷ್ಟ್ರೀಯ ಮೀನುಗಾರಿಕೆ ಅಭಿವೃದ್ಧಿ ಮಂಡಳಿಯಿಂದ ಈಗಾಗಲೇ ಮಂಜೂರಾದ ಮಾರುಕಟ್ಟೆಗಳ ನಿರ್ಮಾಣಕ್ಕೆ ರಾಜ್ಯದ ಪಾಲು ಬಿಡುಗಡೆ ಮಾಡಲು ಅವಕಾಶ ಮಾಡಲಾಗಿದೆ ಈ ಯೋಜನೆಯಡಿ ರಾಷ್ಟ್ರೀಯ ಮೀನುಗಾರಿಕೆ ಅಭಿವೃದ್ಧಿ ಮಂಡಳಿಯಿಂದ ಶೇ.40 ರಷ್ಟು ಸಹಾಯ ಪಡೆಯಲು ಅವಕಾಶವಿದೆ. **(ಅನುದಾನ: ರೂ. 30.00 ಲಕ್ಷ)**

**16. ಸಂಶೋಧನೆ, ವಿಸ್ತರಣೆ, ಪ್ರದರ್ಶನ ಮತ್ತು ತರಬೇತಿ (2405-00-109-0-01):**

ಮೀನುಗಾರಿಕೆ ಅಭಿವೃದ್ಧಿ ಬಗ್ಗೆ ತಾಂತ್ರಿಕ ಲೇಖನಗಳನ್ನು ಪ್ರಕಟಿಸಲು ಮತ್ತು ವಿಸ್ತರಣೆ ಸಲಕರಣೆ ಕೊಳ್ಳಲು ಇಲಾಖೆಯ ಕಾರ್ಯಚಟುವಟಿಕೆಗಳ ಬಗ್ಗೆ ಹಸ್ತಪ್ರತಿಗಳನ್ನು ಮುದ್ರಿಸಲು, ಪ್ರಚಾರ ಪಡಿಸಲು ಆಯವ್ಯಯದಲ್ಲಿ ಅವಕಾಶ ಕಲ್ಪಿಸಲಾಗಿದೆ. ಖಾಸಗಿಯವರಿಗೆ ಮೀನುಗಾರಿಕೆಯಲ್ಲಿ ಹೆಚ್ಚಿನ ಮೀನು ಉತ್ಪಾದಿಸಿದವರಿಗೆ ನಗದು ಬಹುಮಾನ ನೀಡಲು ಹಾಗೂ ಮೀನುಗಾರಿಕೆ ಕುರಿತಾದ ಸಂಶೋಧನೆಗೆ ಅನುದಾನ ಬಿಡುಗಡೆಗೆ ಈ ಯೋಜನೆಯಡಿ ಅವಕಾಶವಿದೆ. ರಾಜ್ಯದಲ್ಲಿ ನಡೆಯುವ ಪ್ರದರ್ಶನಗಳಲ್ಲಿ ಇಲಾಖೆಯಿಂದ ಭಾಗವಹಿಸಲೂ ಈ ಯೋಜನೆಯಡಿ ಅವಕಾಶವಿದೆ. ಪಿಲಿಕುಳದಲ್ಲಿ ಅಕ್ವೇರಿಯಂ ನಿರ್ಮಾಣಕ್ಕೆ ಅವಕಾಶ.
**(ಅನುದಾನ: ರೂ. 662.50 ಲಕ್ಷ)**

**17. ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ (2405-00-110-0-02)**

ಕರಾವಳಿ ಮತ್ತು ಒಳನಾಡಿನಲ್ಲಿ ಸಾಂಪ್ರದಾಯಿಕ ಮೀನುಗಾರರಿಗೆ ಮೀನು ಹಿಡುವಳಿಗೆ ಬೇಕಾದ ಬಲೆ, ಮತ್ತು ಪೂರಕ ಸಾಮಗ್ರಿಗಳನ್ನು ಕಿಟ್ ರೂಪದಲ್ಲಿ ಖರೀದಿಸಲು ಅವಕಾಶ ಮಾಡಲಾಗಿದೆ. ಈ ಯೋಜನೆಯ ಘಟಕ ವೆಚ್ಚ ರೂ.10,000 ಗಳಾಗಿದ್ದು, ಶೇ.100 ರಷ್ಟು ಗರಿಷ್ಠ ಸಹಾಯಧನ ನೀಡಲು ಅವಕಾಶ ಮಾಡಲಾಗಿದೆ.
**(ಅನುದಾನ: ರೂ. 103.00 ಲಕ್ಷ)**

**18. ಮಂಜುಗಡ್ಡೆ ಘಟಕಗಳು ಉಪಯೋಗಿಸಿದ ವಿದ್ಯುಚ್ಛಕ್ತಿಗೆ ಸಹಾಯಧನ (2405–00–110–0–03)**

ಈ ಯೋಜನೆಯಡಿ ಮಂಜುಗಡ್ಡೆ ಘಟಕಗಳು ಉಪಯೋಗಿಸಿದ ವಿದ್ಯುತ್ ಮೇಲೆ ಪ್ರತಿ ಯೂನಿಟ್‌ಗೆ ರೂ.1.50 ರಂತೆ ಸಹಾಯಧನ ನೀಡಲು ಅವಕಾಶ ಕಲ್ಪಿಸಲಾಗಿದೆ. ಪ್ರತಿ ಘಟಕಕ್ಕೆ ಗರಿಷ್ಠ ರೂ.3.00 ಲಕ್ಷ ಸಹಾಯಧನ ಮಾತ್ರ ನೀಡಲಾಗುವುದು. **(ಅನುದಾನ: ರೂ. 400.00 ಲಕ್ಷ)**

**19. ಮೀನುಗಾರರ ಕಲ್ಯಾಣ ಯೋಜನೆಗಳು (ಕೇಂದ್ರ ಪುರಸ್ಕೃತ ಯೋಜನೆ)(2405–00–120–0–07)**

**ಅ) ಕಡಲ ಮೀನುಗಾರರಿಗೆ ಉಳಿತಾಯ ಮತ್ತು ಪರಿಹಾರ ಯೋಜನೆ (100–ಧನ ಸಹಾಯ)**

ಉಳಿತಾಯ ಹಾಗೂ ಪರಿಹಾರ ಯೋಜನೆಯಡಿ ಕರಾವಳಿ ಮೀನುಗಾರರಿಂದ ರೂ.900/– ಗಳನ್ನು ಮೀನುಗಾರಿಕೆ ಅವಧಿಯಲ್ಲಿ ವಸೂಲಿ ಮಾಡಿ ಈ ಮೊತ್ತಕ್ಕೆ ಕೇಂದ್ರ ಸರ್ಕಾರ ರೂ.900/– ಮತ್ತು ರಾಜ್ಯ ಸರ್ಕಾರ ರೂ.900/– ಹೀಗೆ ಒಟ್ಟು ರೂ.2700/– ಗಳನ್ನು ಮೀನುಗಾರಿಕೆ ಇಲ್ಲದ 3 ತಿಂಗಳುಗಳಲ್ಲಿ ಪ್ರತಿ ತಿಂಗಳಿಗೆ ರೂ.900 ರಂತೆ ಪ್ರತಿ ಮೀನುಗಾರರಿಗೆ ನೀಡಲಾಗುವುದು. **(ಅನುದಾನ: ರೂ.731.00 ಲಕ್ಷ)**

**ಆ) ಮತ್ಸ್ಯಾಶ್ರಯ ಯೋಜನೆ (104 ಅಂಶದಾನಗಳು)**

ರಾಜ್ಯದ ಪಾಲು ರೂ.120.00 ಲಕ್ಷ ಗಳನ್ನು ಹುಡ್ಕೊಗೆ ಸಾಲ ಮತ್ತು ಬಡ್ಡಿ ಮರುಪಾವತಿಗೆ ಕಾಯ್ದಿರಿಸಲಾತದೆ. ಕೇಂದ್ರ ಸರ್ಕಾರವು ಮನೆಗಳ ನಿರ್ಮಾಣಕ್ಕಾಗಿ ರೂ.75,000/–ಗಳ ಸಹಾಯಧನ ನೀಡಲು ಅವಕಾಶವಿದ್ದು, ಸಹಾಯಧನವನ್ನು ಕೇಂದ್ರ ಮತ್ತು ರಾಜ್ಯ ಸಮವಾಗಿ ಭರಿಸುತ್ತದೆ. ಕೇಂದ್ರದಿಂದ ಅನುದಾನ ಪಡೆಯಲು ಕೇಂದ್ರದ ಪಾಲು ರೂ.200.00 ಲಕ್ಷ ಒದಗಿಸಲಾತದೆ. **(ಒಟ್ಟು ಅನುದಾನ ರೂ.300.00 ಲಕ್ಷ)**

**ಇ) ಸಾಮೂಹಿಕ ವಿಮಾ ಯೋಜನೆ (106–ಸಹಾಯಧನ):**

ರಾಜ್ಯದ 2.04 ಲಕ್ಷ ಮೀನುಗಾರರಿಗೆ ಗುಂಪು ವಿಮಾ ಸೌಲಭ್ಯ ಒದಗಿಸಲು ರಾಜ್ಯದ ವಿಮಾ ಕಂತನ್ನು ಪಾವತಿಸಲು ಅನುದಾನ ಒದಗಿಸಲಾಗಿದೆ. ಈ ಯೋಜನೆಯಡಿ ವಿಮಾ ಸೌಲಭ್ಯವನ್ನು ಮೀನುಗಾರಿಕೆಯಲ್ಲಿ ತೊಡಗಿರುವಾಗ ನೈಸರ್ಗಿಕ ವಿಕೋಪಗಳಿಂದ ಮರಣ ಹೊಂದಿದ ಮೀನುಗಾರರ ಅವಲಂಬಿತರಿಗೆ ಹಾಗೂ ಶಾಶ್ವತ ಅಂಗವಿಕಲರಾದ ಮೀನುಗಾರರಿಗೆ ರೂ.200,000/– ಗಳ ಪರಿಹಾರ ಮತ್ತು ಭಾಗಶಃ ಅಂಗವಿಕಲರಾದವರಿಗೆ ರೂ.100,000 ಗಳ ಪರಿಹಾರ ನೀಡಲಾಗುವ್ವದು. ವಿಮಾ ಕಂತಿನ ಹಣ ಪ್ರತಿ ವರ್ಷ ದೆಹಲಿಯಲ್ಲಿರುವ ಮೀನುಗಾರರ ಸಹಕಾರ ಸಂಘಗಳ ರಾಷ್ಟ್ರೀಯ ಮಂಡಳಿಗೆ ಬಿಡುಗಡೆ ಮಾಡಲಾಗುವುದು. **(ಅನುದಾನ: ರೂ.22.00 ಲಕ್ಷ)**

**ಈ ಯೋಜನೆಯ ಒಟ್ಟು ಅನುದಾನ: ರೂ.1053.00 ಲಕ್ಷ (ಕೇಂದ್ರದ ಪಾಲು ರೂ.556.00 ಲಕ್ಷ)**

**20. ವಾಣಿಜ್ಯ ಬ್ಯಾಂಕುಗಳಿಗೆ ಬಡ್ಡಿ ವ್ಯತ್ಯಾಸವನ್ನು ತುಂಬಿಕೊಡುವುದು (2405–00–195–0–01)**

ಮೀನುಗಾರರು ಮೀನುಗಾರಿಕೆ ಚಟುವಟಿಕೆಗಳನ್ನು ವಾಣಿಜ್ಯ ಬ್ಯಾಂಕುಗಳಿಂದ ಅಲ್ಪಾವಧಿ ಸಾಲ ತೆಗೆದುಕೊಂಡು ಕೈಗೊಳ್ಳಲು ಅನುಕೂಲವಾಗುವಂತೆ ವಾಣಿಜ್ಯ ಬ್ಯಾಂಕುಗಳು ಶೇ.2 ರಷ್ಟು ಬಡ್ಡಿದರದಲ್ಲಿ ಮೀನುಗಾರರಿಗೆ ಸಾಲ ನೀಡಿದ ಪ್ರಯುಕ್ತ ವ್ಯತ್ಯಾಸದ ಬಡ್ಡಿಯನ್ನು ತುಂಬಿಕೊಡಲು ಈ ಯೋಜನೆಯಡಿ ಅವಕಾಶ ಕಲ್ಪಿಸಲಾಗಿದೆ. ಮೀನುಗಾರರು ರೂ.50,000 ಗಳ ವರೆಗೆ ಸಾಲ ಪಡೆಯಲು ಅವಕಾಶವಿರುತ್ತದೆ. **(ಅನುದಾನ: ರೂ. 100.00 ಲಕ್ಷ)**

**21. ಮೀನುಗಾರಿಕೆ ಕೂಡು ರಸ್ತೆಗಳ ನಿರ್ವಹಣೆ (2405–00–337–0–01)**

ರಾಜ್ಯದ ಕರಾವಳಿಯ ಮೂರು ಜಿಲ್ಲೆಗಳಲ್ಲಿ ಒಟ್ಟು 355.13 ಕಿಮೀ ಉದ್ದದ 218 ಮೀನುಗಾರಿಕೆ ಕೊಂಡಿ ರಸ್ತೆಗಳಿರುತ್ತವೆ. ಮಳೆಯಿಂದ ಈ ಮೀನುಗಾರಿಕೆ ಕೊಂಡಿ ರಸ್ತೆಗಳು ಹಾಳಾಗುತ್ತದೆ. ಇವುಗಳ ದುರಸ್ತಿಯನ್ನು ಮೀನುಗಾರಿಕೆ ಇಲಾಖೆಯಿಂದಲೆ ಕೈಗೊಳ್ಳಲಾಗುತ್ತಿದೆ. ಈ ಯೋಜನೆಯಡಿ ಮೀನುಗಾರಿಕೆ ಕೂಡು ರಸ್ತೆಗಳ ನಿರ್ವಹಣೆಯನ್ನು ಕೈಗೊಳ್ಳಲಾಗುವುದು. **(ಅನುದಾನ: ರೂ. 400.00 ಲಕ್ಷ)**

**22. ರಾಜ್ಯ ವಲಯ ಯೋಜನೆಯಡಿ ಹಿಂದುಳಿದ ವರ್ಗಗಳಿಗೆ ವಿಶೇಷ ಘಟಕ ಉಪ ಯೋಜನೆ (2405–00–789–0–03)**

ಈ ಯೋಜನೆಯಡಿ ಪರಿಶಿಷ್ಠ ಜಾತಿ ಮೀನುಗಾರರಿಗೆ ಅನುಕೂಲವಾಗುವಂತೆ ಮೀನು ಕೊಳಗಳ ನಿರ್ಮಾಣಕ್ಕೆ ಸಹಾಯ, ಮೀನು ಮರಿ ಸಾಕಾಣಿಕೆಗೆ ಹೂಡಿಕೆ ವೆಚ್ಚ, ಮೀನು ಮರಿ ಸಗಾಣಿಕೆಗೆ ವಾಹನ ಖರೀದಿಗೆ ನೆರವು, ತರಬೇತಿ ಮತ್ತು ಇತರೆ ಕಾರ್ಯಕ್ರಮಗಳನ್ನು ಕೈಗೊಳ್ಳಲು ಪ್ರಸ್ತಾವಿಸಲಾಗಿದೆ. **(ಅನುದಾನ: ರೂ. 300.00 ಲಕ್ಷ)**

**23. ಗಿರಿ ಜನ ಉಪ ಯೋಜನೆ (2405–00–796–0–00)**

ಈ ಯೋಜನೆಯಡಿ ಪರಿಶಿಷ್ಠ ಪಂಗಡದ ಮೀನುಗಾರರಿಗೆ ಅನುಕೂಲವಾಗುವಂತೆ ಮೀನು ಕೊಳಗಳ ನಿರ್ಮಾಣಕ್ಕೆ ಸಹಾಯ, ಮೀನು ಮರಿ ಸಾಕಾಣಿಕೆಗೆ ಹೂಡಿಕೆ ವೆಚ್ಚ, ಮೀನು ಮರಿ ಸಗಾಣಿಕೆಗೆ ವಾಹನ ಖರೀದಿಗೆ ನೆರವು, ತರಬೇತಿ ಮತ್ತು ಇತರೆ ಕಾರ್ಯಕ್ರಮಗಳನ್ನು ಕೈಗೊಳ್ಳಲು ಪ್ರಸ್ತಾವಿಸಲಾಗಿದೆ. **(ಅನುದಾನ: ರೂ. 40.00 ಲಕ್ಷ)**

**24. ಮೀನು ಮರಿ ಉತ್ಪಾದನಾ ಕೇಂದ್ರಗಳ ನಿರ್ಮಾಣ ಮತ್ತು ಅಭಿವೃದ್ಧಿ (2405–00–800–0–29)**

ಮೀನುಮರಿ ಉತ್ಪಾದನೆಯನ್ನು ಹೆಚ್ಚಿಸಲು ಮೀನುಮರಿ ಉತ್ಪಾದನಾ ಕೇಂದ್ರಗಳ ನಿರ್ಮಾಣ ಮತ್ತು ನಿರ್ವಹಣೆಗೆ ಅವಕಾಶ ಕಲ್ಪಿಸಲಾಗಿದೆ. ಮೀನುಗಾರಿಕೆ ಅಭಿವೃದ್ದಿಗೆ ಉತ್ತಮ ತಳಿಯ ಮೀನು ಮರಿಗಳು ಪ್ರಮುಖವಾಗಿದ್ದು, ರಾಜ್ಯದಲ್ಲಿ ಒಳನಾಡಿನ ಮೀನುಗಾರಿಕೆಯನ್ನು ಅಭಿವೃದ್ಧಿಪಡಿಸಲು ರಾಜ್ಯದ ಮೀನು ಮರಿ ಉತ್ಪಾದನಾ ಕೇಂದ್ರಗಳ ಸುಧಾರಣೆ, ನವೀಕರಣ ಮತ್ತು ಹೊಸ ಕೇಂದ್ರಗಳ ಸ್ಥಾಪನೆಗೆ ಅವಕಾಶ ಮಾಡಲಾಗಿದೆ. **(ಅನುದಾನ: ರೂ. 100.00 ಲಕ್ಷ)**

**4405– ಬಂಡವಾಳ ಹೂಡಿಕೆಗಳು**

**25. ಮೀನುಗಾರಿಕೆ ಬಂದರುಗಳ ಹೂಳೆತ್ತುವಿಕೆ (ಕೇಂದ್ರ ಪುರಸ್ಕೃತ ಯೋಜನೆ) (4405–00–103–1–02):**

ಮೀನುಗಾರಿಕೆ ಬಂದರುಗಳಲ್ಲಿ ಹೂಳೆತ್ತಲು ಅವಕಾಶ ಕಲ್ಪಿಸಲಾಗಿದೆ. ಪರಿಷ್ಕೃತ ಮಾರ್ಗಸೂಚಿಗಳ ಪ್ರಕಾರ ಕೇಂದ್ರ ಸರ್ಕಾರವು ಪ್ರತಿಶತ 50 ರಷ್ಟು ಮತ್ತು ರಾಜ್ಯ ಸರ್ಕಾರವು ಪ್ರತಿಶತ 50 ರಷ್ಟನ್ನು ಭರಿಸುತ್ತದೆ. ಕೇಂದ್ರ ಸರ್ಕಾರದಿಂದ ಮಂಜೂರಾದ ಕಾಮಗಾರಿಗಳಿಗೆ ಅನುದಾನ ಒದಗಿಸಲಾಗುವುದು. **(ಅನುದಾನ : ರೂ. 400.00 ಲಕ್ಷ (ಕೇಂದ್ರದ ಪಾಲು ರೂ.200.00 ಲಕ್ಷ) )**

**26. ಮೀನುಗಾರಿಕೆ ಬಂದರುಗಳ ನಿರ್ಮಾಣ (ಕೇಂದ್ರ ಪುರಸ್ಕೃತ ಯೋಜನೆ) (4405–00–103–6–01):**

ಮಂಜೂರಾದ ಮೀನುಗಾರಿಕೆ ಬಂದರುಗಳ ಕಾಮಗಾರಿ ಮುಂದುವರಿಕೆಗೆ ಹಾಗೂ ಹೊಸ ಯೋಜನೆಗಳ ಕೈಗೊಳ್ಳಲು ಅವಕಾಶ ಮಾಡಲಾಗಿದೆ. ಪರಿಷ್ಕೃತ ಮಾರ್ಗಸೂಚಿಗಳ ಪ್ರಕಾರ ಕೇಂದ್ರ ಸರ್ಕಾರವು ಪ್ರತಿಶತ 50 ರಷ್ಟು ಮತ್ತು ರಾಜ್ಯ ಸರ್ಕಾರವು ಪ್ರತಿಶತ 50 ರಷ್ಟನ್ನು ಭರಿಸುತ್ತದೆ. ಈಗಾಗಲೇ ಮಂಜೂರಾದ ಯೋಜನೆಗಳು 75:25 ಅನುಪಾತದಲ್ಲಿಯೇ ಮುಂದುವರೆಯುತ್ತದೆ. **(ಅನುದಾನ: ರೂ. 2500.00 ಲಕ್ಷ (ಕೇಂದ್ರದ ಪಾಲು ರೂ.2000.00 ಲಕ್ಷ)**

**27. ಮೀನುಗಾರಿಕೆ ಜೆಟ್ಟಿ ಮತ್ತು ಇಳಿದಾಣಗಳ ನಿರ್ಮಾಣ ಮತ್ತು ನವೀಕರಣ (4405–00–104–0–02):**

ಮೀನುಗಾರಿಕೆ ಇಳಿದಾಣ ಕೇಂದ್ರಗಳ ನಿರ್ಮಾಣ ಹಾಗೂ ನವೀಕರಣಕ್ಕೆ ಅವಕಾಶ ಕಲ್ಪಿಸಲಾಗಿದೆ. ಈ ಲೆಕ್ಕ ಶೀರ್ಷಿಕೆಯಡಿ ಪ್ರಗತಿಯಲ್ಲಿರುವ ಕೊಡೇರಿ ಮೀನುಗಾರಿಕೆ ಬಂದರಿನ ಹಾಗೂ ತೆಂಗಿನಗುಂಡಿ ಅಳ್ವೆಕೋಡಿ ಮೀನುಗಾರಿಕೆ ತಂಗುದಾಣದ ಕಾಮಗಾರಿಗಳನ್ನು ಮುಂದುವರಿಸಲು ಹಾಗೂ ಮರವಂತೆ, ಶಿರೂರು–ಅಳ್ವೆಗದ್ದೆ ಮತ್ತು ಕುಂದಾಪುರ ಕೋಡಿಯಲ್ಲಿ ಬಂದರು ಮತ್ತು ತಡೆಗೋಡೆಗಳ ಕಾಮಗಾರಿಗಳನ್ನು ಪ್ರಾರಂಭಿಸಲು ಹಾಗೂ ಭಟ್ಕಳ ಮತ್ತು ಕಾರವಾರ ಮೀನುಗಾರಿಕೆ ಬಂದರುಗಳಲ್ಲಿಯ ಧಕ್ಕೆಗಳನ್ನು ವಿಸ್ತರಿಸಲು ಅನುದಾನ ನೀಡಲಾಗಿದೆ. ಆಮದಳ್ಳಿ ಮೀನುಗಾರಿಕೆ ಕಾಮಗಾರಿಗಳನ್ನು ಕೇಂದ್ರ ಸರ್ಕಾರದ ಶೇ.75 ರಷ್ಟು ನೆರವಿನೊಂದಿಗೆ ಕೈಗೊಳ್ಳಲಾಗುವುದು. **(ಅನುದಾನ : ರೂ. 2476.00 ಲಕ್ಷ (ಕೇಂದ್ರದ ಪಾಲು ರೂ.1000.00 ಲಕ್ಷ))**

**28. ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ 2013 ರಡಿ ಬಳಕೆಯಾಗದೆ ಇರುವ ಮೊತ್ತ (4405-00-800-0-01)**

ಅನುಸೂಚಿತ ಜಾತಿ ಮತ್ತು ಪಂಗಡಕ್ಕೆ ಸೇರಿದ ಮೀನುಗಾರರಿಗೆ ಅನುಕೂಲವಾಗುವಂತೆ ಕಾಮಗಾರಿಗಳಿಗೆ ವಿನಿಯೋಗಿಸಲಾಗುವುದು. **(ಅನುದಾನ: ರೂ. 185.00 ಲಕ್ಷ)**

**29. ಮೀನುಗಾರಿಕೆ ಕೊಂಡಿ ರಸ್ತೆಗಳ ಸೇತುವೆಗಳ ಮತ್ತು ಜೆಟ್ಟಿಗಳ ನಿರ್ಮಾಣ ನಬಾರ್ಡ್ ಸಹಾಯ (4405-00-800-2-03):**

ಈ ಲೆಕ್ಕ ಶೀರ್ಷಿಕೆಯಡಿ ನಬಾರ್ಡ್ ನೆರವಿನೊಂದಿಗೆ ಗ್ರಾಮೀಣ ಪ್ರದೇಶಗಳಲ್ಲಿ ಮೀನುಗಾರಿಕೆ ರಸ್ತೆ, ಸೇತುವೆ ಮತ್ತು ಜೆಟ್ಟಿಗಳ ನಿರ್ಮಾಣವನ್ನು ತೆಗೆದುಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಈಗಾಗಲೇ ಮಂಜೂರಾದ ಕಾಮಗಾರಿಗಳನ್ನು ಪ್ರಾರಂಭಿಸಲು/ ಮುಂದುವರಿಸಲು ಅನುದಾನ ಒದಗಿಸಲಾಗಿದೆ. **(ಅನುದಾನ: ರೂ.2561.00 ಲಕ್ಷ)**

**<u>ಜಿಲ್ಲಾ ಪಂಚಾಯತ್ ಯೋಜನೆಗಳು</u>**

**1. ಮೀನುಗಾರಿಕೆ ಕಟ್ಟಡಗಳು ಮತ್ತು ಸೌಲಭ್ಯಗಳ ನಿರ್ಮಾಣ ಮತ್ತು ನಿರ್ವಹಣೆ (2405-00-101-0-27)**

ಈ ಲೆಕ್ಕ ಶೀರ್ಷಿಕೆಯಡಿ ಕಛೇರಿ ಕಟ್ಟಡಗಳ ನಿರ್ಮಾಣ ಮತ್ತು ನಿರ್ವಹಣೆ, ಮೀನು ಮರಿ ಉತ್ಪಾದನಾ ಕೇಂದ್ರಗಳ ಮತ್ತು ತಾಲ್ಲೂಕು ಮಟ್ಟದ ನರ್ಸರಿಗಳ ದುರಸ್ತಿ ಮತ್ತು ಸುಧಾರಣೆ, ಕರಾವಳಿ ಜಿಲ್ಲೆಗಳಲ್ಲಿ ಮೀನುಗಾರಿಕೆ ಜೆಟ್ಟಿಗಳ, ಇಳಿದಾಣ ಕೇಂದ್ರಗಳ, ಹರಾಜು ಪ್ರಾಂಗಣಗಳ ನಿರ್ಮಾಣ ಮತ್ತು ನಿರ್ವಹಣೆ, ಕಾರವಾರ, ಹಾಸನ, ಬೆಳಗಾವಿ, ಕಲಬುರ್ಗಿ, ದಕ್ಷಿಣ ಕನ್ನಡ, ಬೀದರ್, ಕೋಲಾರ, ಕೊಡಗು ಮತ್ತು ವಿಜಯಪುರ ಜಿಲ್ಲೆಗಳ ಮತ್ಸ್ಯಾಲಯಗಳ ನಿರ್ವಹಣೆ ವೆಚ್ಚ ಮತ್ತು ಇತರ ಸಾಮಗ್ರಿಗಳ ಖರೀದಿಗೆ ಅನುದಾನವನ್ನು ಒದಗಿಸಲಾಗಿದೆ. **ಅನುದಾನ: ರೂ.369.65 ಲಕ್ಷ**

**2. ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ (2405-00-101-0-28):**

ಈ ಯೋಜನೆಯಡಿ ಜೌಗು ಹಾಗೂ ಚೌಳು ಪ್ರದೇಶಗಳಲ್ಲಿ ಒಂದು ಎಕರೆ ಮೀನು ಕೃಷಿ ಕೊಳ ನಿರ್ಮಿಸಲು ಪ್ರತಿ ಎಕರೆ ಮೀನು ಕೃಷಿ ಕೊಳ ನಿರ್ಮಾಣ ಹಾಗೂ ಮೊದಲ ವರ್ಷದ ಆವರ್ತಕ ವೆಚ್ಚದ ಶೇಕಡ 25 ರಷ್ಟು ಅಂದರೆ ಗರಿಷ್ಠ ರೂ.30,000/- ಸಹಾಯಧನವಾಗಿ ನೀಡಲಾಗುತ್ತದೆ. ಒಂದು ಎಕರೆ ಸ್ವಂತ ಜಮೀನಿನಲ್ಲಿ ಮೀನುಕೃಷಿ ಕೊಳವನ್ನು ನಿರ್ಮಾಣ ಮಾಡಿ ಮೀನುಗಾರಿಕೆಯನ್ನು ತೆಗೆದುಕೊಳ್ಳಲು ಖಾಸಗಿ ವ್ಯಕ್ತಿಗಳಿಗೆ ರೂ.10,000.00 ಗಳ ಸಹಾಯಧನವಾಗಿ ನೀಡಲಾಗುತ್ತದೆ. ಅಲ್ಲದೆ, ಹುಲ್ಲುಗೆಂಡೆ ಮೀನುಮರಿಗಳನ್ನು ಕೆರೆಗಳಲ್ಲಿ ಬಿತ್ತನೆ ಮಾಡಿದ ಕೃಷಿಕರಿಗೆ ಶೇಕಡ 50 ರಷ್ಟು ಗರಿಷ್ಠ ರೂ.5000 ಗಳಿಗೆ ಮೀರದಂತೆ ಸಹಾಯಧನವನ್ನು ನೀಡಲಾಗುವುದು ಹಾಗೂ ಬಾವಿ ಮತ್ತು ನೀರಾವರಿ ಹೊಂಡಗಳಲ್ಲಿ ಮೀನು ಕೃಷಿಗಾಗಿ 250 ಸಾಮಾನ್ಯ ಗೆಂಡೆ ಮರಿಗಳನ್ನು ಉಚಿತವಾಗಿ ಸರಬರಾಜು ಮಾಡಿ ಮೀನು ಕೃಷಿಯನ್ನು ಪ್ರೋತ್ಸಾಹಿಸಲಾಗುವುದು.

ಈ ಯೋಜನೆಯಡಿ ಅನುದಾನವನ್ನು ಮೀನುಮರಿ ಕೇಂದ್ರದಲ್ಲಿ ಮೀನುಮರಿ ಉತ್ಪಾದನೆಗೆ, ತಾಲ್ಲೂಕು ಮಟ್ಟದ ನರ್ಸರಿಗಳಲ್ಲಿ, ಫಾರಂಗಳಲ್ಲಿ, ಕೇಜ್ ಮತ್ತು ಪೆನ್‌ಗಳಲ್ಲಿ ಮೀನುಮರಿ ಪಾಲನೆಗೆ, ಹಾಗೂ ನಿರ್ವಹಣೆಗೆ ತಗಲುವ ವೆಚ್ಚಗಳಿಗೆ, ಮೀನುಮರಿ ಖರೀದಿ ಮತ್ತು ಸಾಗಾಣಿಕೆಗೆ, ವಾಹನಗಳ ಖರೀದಿ, ನಿರ್ವಹಣೆ ಮತ್ತು ಇತರ ಸಲಕರಣೆಗಳ ಖರೀದಿಗೆ ಉಪಯೋಗಿಸಲು ಅವಕಾಶ ಕಲ್ಪಿಸಲಾಗಿದೆ. **ಅನುದಾನ: ರೂ.386.45 ಲಕ್ಷ**

**3. ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ (2405-00-101-0-30)**

ಮೀನುಗಾರರು ಮೀನನ್ನು ತಾಜಾ ಹಾಗೂ ಆರೋಗ್ಯಕರ ಸ್ಥಿತಿಯಲ್ಲಿ ಮಾರಾಟ ಮಾಡಲು ಅನುಕೂಲವಾಗುವಂತೆ ಶಾಖ ನಿರೋಧಕ ಪೆಟ್ಟಿಗೆ ಮತ್ತು ಸೈಕಲ್ಲುಗಳನ್ನು ಖರೀದಿಸಲು ಪ್ರತಿಶತ 50ರ ನೆರವಿನೊಂದಿಗೆ ಗರಿಷ್ಠ ರೂ.2000 ಸಹಾಯ ಧನವನ್ನು ಹಾಗೂ ದ್ವಿಚಕ್ರ ವಾಹನ ಮತ್ತು ಶಾಖ ನಿರೋಧಕ ಪೆಟ್ಟಿಗೆ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.10000/- ಗಳ ಸಹಾಯಧನವನ್ನು ನೀಡಲಾಗುವುದು.

ಇಳಿದಾಣ ಕೇಂದ್ರಗಳಿಂದ ತಾಜಾ ಮೀನನ್ನು ಆರೋಗ್ಯಕರ ರೀತಿಯಲ್ಲಿ ಮಾರಾಟ ಸ್ಥಳಗಳಿಗೆ ತ್ವರಿತ ಸಾಗಾಣಿಕೆಗಾಗಿ ಮೀನುಗಾರರಿಗೆ ವಾಹನವನ್ನು ಖರೀದಿಸಲು ಆರ್ಥಿಕ ನೆರವನ್ನು ನೀಡುವ ಉದ್ದೇಶದಿಂದ "ಮತ್ಸ್ಯವಾಹಿನಿ" ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ. ತ್ರಿಚಕ್ರ ಟೆಂಪೋ ರಿಕ್ಷಾವನ್ನು ಖರೀದಿಸಲು ಶೇ.25 ರಷ್ಟು

ಗರಿಷ್ಠ ರೂ.30,000 ಗಳ ಸಹಾಯಧನವನ್ನು ಹಾಗೂ ನಾಲ್ಕು ಚಕ್ರದ ವಾಹನ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.35,000 ಗಳ ಸಹಾಯಧನವನ್ನು ಮೂರು ಅಥವಾ ನಾಲ್ಕು ಫಲಾನುಭವಿಗಳ ಒಂದು ಗುಂಪಿಗೆ ನೀಡಲಾಗುವುದು.

ಇದಲ್ಲದೆ ಸದರಿ ಯೋಜನೆಯಡಿ ಯಾಂತ್ರೀಕೃತವಲ್ಲದ (ಪಾತಿ) ದೋಣಿ ಹೊಂದಿರುವ ಮೀನುಗಾರರಿಗೆ ಮೀನುಗಾರಿಕೆ ಸಲಕರಣೆಗಳನ್ನು ಗರಿಷ್ಠ ರೂ.10000/- ಗಳ ಘಟಕ ವೆಚ್ಚದಲ್ಲಿ ಖರೀದಿಸಲು ಮತ್ತು ಪ್ರತಿಶತ 50 ರಷ್ಟು ಅಂದರೆ ಗರಿಷ್ಠ ರೂ.5000/- ಗಳನ್ನು ಸಹಾಯಧನವಾಗಿ ನೀಡಲು ಅವಕಾಶ ಕಲ್ಪಿಸಲಾಗಿದೆ. **ಅನುದಾನ: ರೂ.123.80 ಲಕ್ಷ**

4. **ಪ್ರದರ್ಶನ ಮತ್ತು ತರಬೇತಿ (2405-00-101-0-32):**

ಮೀನು ಕೃಷಿಯ ಹಿತದೃಷ್ಟಿಯಿಂದ ಸಾರ್ವಜನಿಕರ ಮಾಹಿತಿಗಾಗಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ನಡೆಯುವ ವಸ್ತು ಪ್ರದರ್ಶನದಲ್ಲಿ ಮೀನುಗಾರಿಕಾ ಇಲಾಖಾ ಕಾರ್ಯಕ್ರಮಗಳ ಬಗ್ಗೆ ಪ್ರದರ್ಶಿಸಲಾಗುವುದು. ಹಾಗೂ ಆಸಕ್ತಿ ಹೊಂದಿದ ಕೃಷಿಕರಿಗೆ ಮೀನು ಕೃಷಿಯ ಬಗ್ಗೆ ತರಬೇತಿ ನೀಡುವುದು, ಮತ್ಸ್ಯಪಾಲನೆ ಮತ್ತು ಇಲಾಖಾ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಲಾಗುವುದು. **ಅನುದಾನ: ರೂ.65.10 ಲಕ್ಷ**

5. **ಕೇಂದ್ರ ಪುರಸ್ಕೃತ ಯೋಜನೆ: ಸಾಂಪ್ರದಾಯಿಕ ನಾಡದೋಣಿಗಳ ಮೋಟರೀಕರಣ ಯೋಜನೆ (2405-00-196-6-01) ಜಿಲ್ಲಾ ವಲಯ:**

ಕೇಂದ್ರ ಪುರಸ್ಕೃತ ಸಾಂಪ್ರದಾಯಿಕ ದೋಣಿಗಳ ಮೋಟರೀಕರಣ ಯೋಜನೆಯನ್ನು ರಾಜ್ಯದಲ್ಲಿ 1987-88ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದ್ದು, ಇದುವರೆವಿಗೆ 3493 ನಾಡದೋಣಿಗಳನ್ನು ಮೋಟರೀಕರಣಗೊಳಿಸಲಾಗಿದೆ. ಈ ಯೋಜನೆಯಡಿ ಪ್ರತಿ ಔಟ್ ಬೋರ್ಡ್ ಮೋಟಾರಿಗೆ ಘಟಕ ವೆಚ್ಚದ ಶೇ.50 ರಷ್ಟು ಅಂದರೆ ಗರಿಷ್ಠ ರೂ.30,000/- ರಂತೆ ಸಹಾಯಧನ ನೀಡಲಾಗುತ್ತಿದ್ದು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು 50:50 ಅನುಪಾತದಲ್ಲಿ ಈ ಸಹಾಯಧನವನ್ನು ನೀಡುತ್ತಿವೆ. ಫಲಾನುಭವಿಗಳು ಉಳಿದ ಹಣವನ್ನು ಹಣಕಾಸು ಸಂಸ್ಥೆಗಳಿಂದ ಸಾಲದ ರೂಪದಲ್ಲಿ ಪಡೆಯಲು ಅವಕಾಶವಿದೆ. **ಅನುದಾನ: ರೂ.116.00 ಲಕ್ಷ**

**ಈ ಯೋಜನೆಗಳಲ್ಲದೆ ಮೀನುಗಾರಿಕೆ ಇಲಾಖೆಯಿಂದ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.**

- **ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ:**

ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಮೀನು ಮರಿ ಕೇಂದ್ರಗಳ ಉನ್ನತೀಕರಣ, ಕೇಜ್ ಕಲ್ಚರ್, ಕ್ಲಸ್ಟರ್ ಮಾದರಿಯಲ್ಲಿ ಮೀನು ಕೃಷಿ, ಮೀನು ಮಾರಾಟ ವಿಸ್ತರಣೆ ಮತ್ತು ಆಧುನೀಕರಣ, ಉತ್ತಮ ಗುಣಮಟ್ಟದ ಮೀನು ಮರಿ ಉತ್ಪಾದನೆಗೆ ಅಧ್ಯಯನ ಹಾಗೂ ವಿಶೇಷ ಅಭಿವೃದ್ಧಿ ಯೋಜನೆಯಡಿ ಮೀನು ಸಲಕರಣೆಗಳ ಖರೀದಿಗೆ ಸಹಾಯ, ಮೀನುಗಾರಿಕೆ ಸಹಕಾರ ಸಂಘಗಳ ಅಭಿವೃದ್ಧಿ, ಇತ್ಯಾದಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

- **ಕೆರೆಗಳ ಅಭಿವೃದ್ಧಿ:**

ರಾಜ್ಯದಲ್ಲಿರುವ ಒಳನಾಡು ಜಲಸಂಪನ್ಮೂಲಗಳನ್ನು ಅಭಿವೃದ್ಧಿ ಪಡಿಸಲು ಹೊಸ ಗುತ್ತಿಗೆ ನಿಯಮಾವಳಿಗಳನ್ನು ರೂಪಿಸಿದ್ದು, ಈ ನಿಯಮಾವಳಿ ಪ್ರಕಾರ ಈ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕಿನ ಗುತ್ತಿಗೆಯನ್ನು ಪಡೆಯಲು ನೋಂದಾಯಿಸಲ್ಪಟ್ಟ ಮೀನುಗಾರರ ಸಹಕಾರ ಸಂಘಗಳಿಗೆ ಮಾತ್ರ ಅವಕಾಶ ಕಲ್ಪಿಸಲಾಗಿದೆ. ಗುತ್ತಿಗೆಗೆ ಕೋರದ ಕೆರೆಗಳನ್ನು ಸಾರ್ವಜನಿಕವಾಗಿ ಟೆಂಡರ್ ಕಂ ಹರಾಜು ಮೂಲಕ ವಿಲೇವಾರಿ ಮಾಡಿ ಅಭಿವೃದ್ಧಿಪಡಿಸಲಾಗುವುದು. ಕೆರಗಳ ಶೇ.50ರ ಜಲ ವಿಸ್ತೀರ್ಣವನ್ನು ಗಣನೆಗೆ ತೆಗೆದುಕೊಂಡು ಪ್ರತಿ ಹೆಕ್ಟೇರ್ ಜಲ ವಿಸ್ತೀರ್ಣಕ್ಕೆ ರೂ.300/- ರಂತೆ ಹಾಗೂ ಹಿಂದಿನ 3 ವರ್ಷಗಳ ಸರಾಸರಿ ಗುತ್ತಿಗೆ ಮೊತ್ತ, ಇವುಗಳಲ್ಲಿ ಯಾವುದು ಹೆಚ್ಚು ಆ ಮೊತ್ತವನ್ನು ಗುತ್ತಿಗೆ ಮೊತ್ತವಾಗಿ ನಿಗದಿಪಡಿಸಿ ಗರಿಷ್ಠ 5 ವರ್ಷಗಳ ಅವಧಿಗೆ ಮೀನುಕೃಷಿಗೆ ನೀಡಲಾಗುವುದು.

## Section 4(1) (b) (xiii)

## Particulars of Recipients of Concessions, Permits or Authorization Granted by Public Authority

**-NIL-**

## Section 4(1) (b) (xiv)

## Information Available in Electronic Form

Information related to the various schemes of the department are available in website kar.nic.in

ಇಲಾಖೆಯ ವಿವಿಧ ಯೋಜನೆಗಳಿಗೆ ಸಂಬಂಧಿಸಿದ ಮಾಹಿತಿಗಳನ್ನು ಇಲಾಖೆಯ ವೆಬ್ ಸೈಟ್: kar.nic.in ನಲ್ಲಿ ದೊರೆಯುತ್ತದೆ.

## Section 4(1) (b) (xv)

ಸಾರ್ವಜನಿಕಕರು ಮಾಹಿತಿಯನ್ನು ಪಡೆಯಲು ಲಭ್ಯವಿರುವ ಅನುಕೂಲತೆಗಳ ವಿವರ

## (Particulars of Facilities available to Citizens for obtaining Information)

ಸಾರ್ವಜನಿಕಕರು ಇಲಾಖೆಯ ವಿವಿಧ ಯೋಜನೆಗಳಿಗೆ ಸಂಬಂಧಿಸಿದ ಮಾಹಿತಿಗಳನ್ನು ಇಲಾಖೆಯ ತಾಲೂಕು ಮಟ್ಟದ ಅಧಿಕಾರಿಗಳಿಂದ ಪಡೆಯಬಹುದು. ಹಾಗೂ ಇಲಾಖೆಯ ವೆಬ್ ಸೈಟ್: kar.nic.in ನಲ್ಲಿ ಕೂಡಾ ಪಡೆಯಬಹುದು.

Citizens can obtain the information related to various schemes of the department from Taluk level office. Also they can access the information through above said website.

## Section 4(1) (b) (xvi)

ಸಾರ್ವಜನಿಕ ಮಾಹಿತಿ ಅಧಿಕಾರಗಳ ಹೆಸರು, ಪದನಾಮ ಹಾಗೂ ಇತರ ವಿವರಗಳು

**(Names, Designations and other Particulars of Public Information Officers)**

**ಸಾರ್ವಜನಿಕ ಮಾಹಿತಿ ಅಧಿಕಾರಿ :**

| ಕ್ರಮ ಸಂಖ್ಯೆ | ಅಧಿಕಾರಿಗಳ ಹೆಸರು | ಪದನಾಮ | ದೂರವಾಣಿ ಸಂಖ್ಯೆ |
|---|---|---|---|
| 1 | ಶ್ರೀ ಡಿ.ಶಿವಪ್ರಸಾದ್ , | ಮೀನುಗಾರಿಕೆ ಹಿರಿಯ ಸಹಾಯಕ ನಿರ್ದೇಶಕರು (ಆಡಳಿತ) | 080-22864604 |

**ಮೇಲ್ಮನವಿ ಪ್ರಾಧಿಕಾರ :**

| ಕ್ರಮ ಸಂಖ್ಯೆ | ಅಧಿಕಾರಿಗಳ ಹೆಸರು | ಪದನಾಮ | ದೂರವಾಣಿ ಸಂಖ್ಯೆ |
|---|---|---|---|
| 1 | ಡಾ॥ ಸಿ.ಕೆ.ಮೂರ್ತಿ | ಮೀನುಗಾರಿಕೆ ಜಂಟಿ ನಿರ್ದೇಶಕರು (ಕರಾವಳಿ) | 080-22864654 |
| 2 | ಶ್ರೀ ಹೆಚ್.ಎಸ್. ವೀರಪ್ಪ ಗೌಡ, | ಮೀನುಗಾರಿಕೆ ಜಂಟಿ ನಿರ್ದೇಶಕರು (ಒಳನಾಡು) (ಪ್ರಭಾರ) | 080-22864635 |

**ಸಾರ್ವಜನಿಕ ಪ್ರಾಧಿಕಾರ :**

| ಕ್ರಮ ಸಂಖ್ಯೆ | ಅಧಿಕಾರಿಗಳ ಹೆಸರು | ಪದನಾಮ | ದೂರವಾಣಿ ಸಂಖ್ಯೆ |
|---|---|---|---|
| 1 | ಶ್ರೀ ಹೆಚ್.ಎಸ್. ವೀರಪ್ಪ ಗೌಡ, | ಮೀನುಗಾರಿಕೆ ನಿರ್ದೇಶಕರು | 080-22864681 |

## Section 4(1) (b) (xvii)

ಇತರ ಉಪಯುಕ್ತ ಮಾಹಿತಿಗಳು

**(Other Useful Information)**

**-NIL-**